6

# ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ 02 ಇಎಸ್‌ಟಿ [9] 2017 /3172

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001,
ದಿನಾಂಕ:27-02-2018.

## ಹಿಂಬರಹ

ಕರ್ನಾಟಕ ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 41 ಸೇನೆನಿ 2017 ಬೆಂಗಳೂರು ದಿನಾಂಕ:19/02/2018ರ ಪ್ರತಿಯನ್ನು ಮಾಹಿತಿಗಾಗಿ ಈ ಕೆಳಕಂಡವರಿಗೆ ಕಳುಹಿಸಿಕೊಡಲಾಗಿದೆ.

1. ಈ ಇಲಾಖೆಯ ಅಧೀನಕ್ಕೊಳಪಡುವ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು, ಸರ್ಕಾರಿ ಪಾಲಿಟೆಕ್ನಿಕ್, ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳು, ಸ್ಪೆರಿಕ್ ಸಂಸ್ಥೆ, ಬೆಂಗಳೂರು, ಸರ್ಕಾರಿ ಗಣಿ ಶಿಕ್ಷಣ ಶಾಲೆ, ಕೆ.ಜಿ.ಎಫ್ ಸಂಸ್ಥೆಗಳ ಪ್ರಿನ್ಸಿಪಾಲರುಗಳಿಗೆ ಮಾಹಿತಿಗಾಗಿ [ಇಲಾಖಾ ವೆಬ್‌ಸೈಟ್ ಮುಖಾಂತರ]
2. ಈ ನಿರ್ದೇಶನಾಲಯದ ಎಲ್ಲಾ ಅಧಿಕಾರಿಗಳಿಗೆ, ಜಂಟಿ ನಿರ್ದೇಶಕರು(ಆಡಳಿತ), ಆಡಳಿತಾಧಿಕಾರಿ, ಸಹಾಯಕ ಆಡಳಿತಾಧಿಕಾರಿ (1), (2) ಹಾಗೂ (3), ಸಾರ್ವಜನಿಕ ಸಂಪರ್ಕಾಧಿಕಾರಿ ಹಾಗೂ ರಿಜಿಸ್ಟ್ರಾರ್ (ಆಡಳಿತ) ಮಾಹಿತಿಗಾಗಿ
3. ನಿರ್ದೇಶಕರ ಆಪ್ತ ಶಾಖೆಗೆ
4. ಈ ನಿರ್ದೇಶನಾಲಯದ ಇಎಸ್‌ಟಿ (1) ರಿಂದ (10) ವಿಭಾಗಕ್ಕೆ ಮಾಹಿತಿಗಾಗಿ
5. ಈ ನಿರ್ದೇಶನಾಲಯದ ಇ-ಆಡಳಿತ ವಿಭಾಗಕ್ಕೆ ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ

ಆಡಳಿತಾಧಿಕಾರಿ

Sh-est(9) Endsmnt

C. No - 19751

ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 41 ಸೇನೆನಿ 2017

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನಸೌಧ, ಬೆಂಗಳೂರು
ದಿನಾಂಕ: 19/02/2018

## ಸುತ್ತೋಲೆ

ವಿಷಯ : ರಾಜ್ಯ ನಾಗರಿಕ ಸೇವಾ ಹುದ್ದೆಗಳ ನೇರ ನೇಮಕಾತಿಯಲ್ಲಿ ಅಂಗವಿಕಲರಿಗೆ ಮೀಸಲಾರಿಸಿರುವ ರಿಕ್ತ ಸ್ಥಾನಗಳನ್ನು ಭರ್ತಿ ಮಾಡುವ ಬಗ್ಗೆ

JD(Ad)/Reg(Ad)

ಉಲ್ಲೇಖ : ದಿನಾಂಕ: 22/11/2016ರ ಸರ್ಕಾರದ ಆದೇಶ ಸಂಖ್ಯೆ: ಡಿಪಿಎಆರ್ 235 ಸೇನೆನಿ 2012.

*****

ಅಂಗವಿಕಲ ವ್ಯಕ್ತಿಗಳ ಹಕ್ಕುಗಳ ಅಧಿನಿಯಮ, 2016ರ ಸೆಕ್ಷನ್ 34ರನ್ವಯ ರಾಜ್ಯ ನಾಗರಿಕ ಸೇವಾ ಹುದ್ದೆಗಳ ನೇರ ನೇಮಕಾತಿಯಲ್ಲಿ ಅಂಗವಿಕಲ ಅಭ್ಯರ್ಥಿಗಳಿಗಾಗಿ ಗುರುತಿಸಿ ಅಧಿಸೂಚಿಸಿದ ರಿಕ್ತ ಸ್ಥಾನಗಳನ್ನು ನಿಗದಿತ ಅಂಗವೈಕಲ್ಯ ಹೊಂದಿದ ಅಭ್ಯರ್ಥಿಯಿಂದಲೇ ಭರ್ತಿ ಮಾಡಬೇಕಾಗಿರುತ್ತದೆ.

ದಿನಾಂಕ: 22/11/2016ರ ಉಲ್ಲೇಖಿತ ಸರ್ಕಾರಿ ಆದೇಶದಲ್ಲಿ ರಾಜ್ಯ ನಾಗರಿಕ ಸೇವೆಯಲ್ಲಿ ಅಂಗವಿಕಲರಿಗೆ ಮೀಸಲಾರಿಸಿರುವ ರಿಕ್ತಸ್ಥಾನಗಳಿಗೆ ನಿಗದಿತ ಅಂಗವೈಕಲ್ಯತೆ ಹೊಂದಿದ ಅಭ್ಯರ್ಥಿ ಲಭ್ಯವಿಲ್ಲದೇ ಭರ್ತಿಯಾಗದ ರಿಕ್ತ ಸ್ಥಾನವನ್ನು ಮುಂದಿನ ನೇಮಕಾತಿಗೆ ಪರಿಗಣಿಸುವ ಬಗ್ಗೆ ಎಲ್ಲಾ ನೇಮಕಾತಿ ಪ್ರಾಧಿಕಾರಗಳಿಗೆ ಕೆಳಕಂಡಂತೆ ಸ್ಪಷ್ಟೀಕರಿಸಲಾಗಿದೆ:

- ಅಧಿಸೂಚಿಸಿರುವ ಅಂಗವಿಕಲತೆ ಹೊಂದಿರುವ ಅಭ್ಯರ್ಥಿ ಲಭ್ಯವಿಲ್ಲದೇ ಇದ್ದಲ್ಲಿ ಅಂತಹ ರಿಕ್ತ ಸ್ಥಾನವನ್ನು ಮುಂದಿನ ನೇಮಕಾತಿಗೆ ಮುಂದಕ್ಕೊಯ್ಯತಕ್ಕದ್ದು (Carry forward). ಮುಂದಿನ ನೇಮಕಾತಿಯಲ್ಲಿಯೂ ಅಧಿಸೂಚಿತ ಅಂಗವಿಕಲತೆ ಹೊಂದಿರುವ ಅಭ್ಯರ್ಥಿ ಲಭ್ಯವಿಲ್ಲದೇ ಇದ್ದಲ್ಲಿ, ನೇರ ಮೀಸಲಾತಿಯಡಿ ಬರುವ ಆಯಾ ಪ್ರವರ್ಗದ ಇತರ ಅಂಗವಿಕಲತೆಯುಳ್ಳ ಅರ್ಹ ಅಂಗವಿಕಲ ಅಭ್ಯರ್ಥಿಯಿಂದ ಭರ್ತಿ ಮಾಡುವುದು.
- ಒಂದು ವೇಳೆ ಮುಂದಕ್ಕೊಯ್ದ ನೇಮಕಾತಿಯಲ್ಲಿ ಯಾವುದೇ ಅಂಗವಿಕಲ ಅಭ್ಯರ್ಥಿ ಲಭ್ಯವಿಲ್ಲದಿದ್ದಲ್ಲಿ, ಅಂತಹ ರಿಕ್ತಸ್ಥಾನವನ್ನು ಆಯಾ ಪ್ರವರ್ಗದ ಇತರೆ ಅರ್ಹ ಅಭ್ಯರ್ಥಿಯಿಂದ ಭರ್ತಿ ಮಾಡಲು ಈ ಆದೇಶದ ನಂತರ ಮಾಡುವ ಎಲ್ಲಾ ನೇರ ನೇಮಕಾತಿ ಅಧಿಸೂಚನೆಗಳಲ್ಲಿ ಅಳವಡಿಸಿಕೊಳ್ಳುವುದು.

ಪು.ತಿ.ನೋ..2

ದಿನಾಂಕ: 22/11/2016ರ ಆದೇಶವನ್ನು ಕಾರ್ಯಗತಗೊಳಿಸುವ ಸಂದರ್ಭದಲ್ಲಿ ಕೈಗೊಳ್ಳಬಹುದಾದ ಕ್ರಮದ ಬಗ್ಗೆ ಎಲ್ಲಾ ನೇಮಕಾತಿ ಪ್ರಾಧಿಕಾರಗಳು ಕೆಳಕಂಡ ಮಾರ್ಗಸೂಚಿಗಳನ್ನು ಅನುಸರಿಸುವಂತೆ ತಿಳಿಸಲಾಗಿದೆ:

(1) ನೇಮಕಾತಿ ಅಧಿಸೂಚನೆಯಲ್ಲಿ ಅಂಗವಿಕಲರಿಗೆ ಮೀಸಲಿರಿಸಿರುವ ಹುದ್ದೆಗಳ ವರ್ಗೀಕರಣವನ್ನು ಸ್ಪಷ್ಟವಾಗಿ ನಮೂದಿಸುವುದು.

(2) ರಾಜ್ಯ ನಾಗರಿಕ ಸೇವೆಯಲ್ಲಿ ಅಂಗವಿಕಲರಿಗೆ ಮೀಸಲಿರಿಸಿರುವ ರಿಕ್ತಸ್ಥಾನಗಳಲ್ಲಿ ನಿಗದಿತ ಅಂಗವೈಕಲ್ಯತೆ ಹೊಂದಿದ ಅಭ್ಯರ್ಥಿ ಲಭ್ಯವಿಲ್ಲದೇ ಭರ್ತಿಯಾಗದ ರಿಕ್ತ ಸ್ಥಾನವನ್ನು ಮುಂದಿನ ನೇಮಕಾತಿಗೆ ಪರಿಗಣಿಸುವ ಸಂದರ್ಭದಲ್ಲಿ ಮೊದಲು ಮುಂದಕ್ಕೊಯ್ದ ಅಂಗವಿಕಲ ರಿಕ್ತ ಸ್ಥಾನಗಳನ್ನು ಭರ್ತಿ ಮಾಡುವುದು.

(ಪಿ.ರವಿಕುಮಾರ್)
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ

ಗೆ:
ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ದಿನಾಂಕ: 19/02/2018ರ ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಿ ಇದರ 100 ಪ್ರತಿಗಳನ್ನು ಒದಗಿಸಲು.

ಪ್ರತಿಗಳು:
1. ಸರ್ಕಾರದ ಎಲ್ಲಾ ಇಲಾಖೆಗಳ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು / ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು
2. ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ / ಪರಿಷತ್ತು, ಬೆಂಗಳೂರು
3. ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ನೃಪತುಂಗ ರಸ್ತೆ, ಬೆಂಗಳೂರು
4. ಎಲ್ಲಾ ಇಲಾಖಾ ಮುಖ್ಯಸ್ಥರು
5. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು/ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್
6. *ಮಹಾನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು
7. *ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು
8. *ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು
9. *ನಿಬಂಧಕರು, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, 6 ಮತ್ತು 7ನೇ ಮಹಡಿ, ಕಂದಾಯ ಭವನ, ಕೆ.ಜಿ.ರಸ್ತೆ, ಬೆಂಗಳೂರು-- 560 009.
10. *ನಿಬಂಧಕರು, ಕರ್ನಾಟಕ ಮೇಲ್ಮನವಿ ನ್ಯಾಯಾಧೀಕರಣ, ಬಹುಮಹಡಿಗಳ ಕಟ್ಟಡ, ಬೆಂಗಳೂರು
11. ಸರ್ಕಾರದ ಎಲ್ಲಾ ವಿಶೇಷ / ಅಪರ / ಜಂಟಿ / ಉಪ / ಅಧೀನ ಕಾರ್ಯದರ್ಶಿಗಳು
12. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು
13. ಶಾಖಾ ರಕ್ಷಾ ಕಡತ / ಅಧಿಕ ಪ್ರತಿಗಳು (* ಮುಖ ಪತ್ರದೊಂದಿಗೆ)